# ಕರ್ನಾಟಕ ಸರ್ಕಾರ

ಸಂಖ್ಯೆ: 19 ಎಸ್‌ಇಎಸ್ 98 | ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು–1

ಇವರಿಗೆ,

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಮಾನ್ಯರೆ,

ವಿಷಯ : ಖಾಸಗಿ ಪ್ರೌಢಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡುವ ಕುರಿತು

ಉಲ್ಲೇಖ : 1) ಅ.ಸ.ಪತ್ರ.ಸಂಖ್ಯೆ: ಸಿ8(2) ಶಾಶಿಅ–ಇತರೆ.15: ಜೆವಿ:91–92 ದಿನಾಂಕ: 02–03–1998.
2) ಸರ್ಕಾರಿ ಆದೇಶ ಸಂಖ್ಯೆ : ಇಡಿ:155 ಎಸ್‌ಓಹೆಚ್ 95 ದಿನಾಂಕ: 28–10–1996

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು, ಹೆಚ್ಚುವರಿ ವಿಭಾಗಗಳಿಗೆ ಮಂಜೂರಾತಿ ನೀಡುವ ಬಗ್ಗೆ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಅನೇಕ ಪ್ರಕರಣಗಳು ದಾಖಲಾಗಿದ್ದು ನ್ಯಾಯಾಲಯದ ಅಂತಿಮ ತೀರ್ಪಿಗಾಗಿ ಕಾಯಲಾಗುತ್ತಿದೆ. ಈ ಹಿನ್ನಲೆಯಲ್ಲಿ ದಿನಾಂಕ: 1–1–1996ರ ನಂತರ ರಾಜ್ಯದಲ್ಲಿನ ಅನುದಾನಿತ ಶಾಲೆಗಳಲ್ಲಿ ಯಾವುದೇ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡದಿರಲು ನಿರ್ಧರಿಸಲಾಗಿದೆ. ಆದುದರಿಂದ, ಯಾವುದೇ ಅನುದಾನಿತ ಶಾಲೆಗಳಲ್ಲಿ ಸರ್ಕಾರದ ಮುಂದಿನ ಆದೇಶದವರೆಗೆ ಅನುದಾನಿತ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡಬಾರದೆಂದು ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,
(ಸಹಿ)
(ಆರ್. ನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

## ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು

ಸಂಖ್ಯೆ: ಸಿ8(8)/ಶಾ.ಶಿ.ಅ/ಅಧಿಕ ವಿಭಾಗ/2000-01 ದಿ: 16-11-2000

### ಸುತ್ತೋಲೆ

ವಿಷಯ : ಖಾಸಗಿ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ : ಸರ್ಕಾರದ ಆದೇಶ ಸಂಖ್ಯೆ: ಇಡಿ 19/ಎಸ್‌ಇಎಸ್ 98 ಬೆಂಗಳೂರು, ದಿನಾಂಕ: 19-6-1999.

*******

ಖಾಸಗಿ ಶಾಶ್ವತ ಅನುದಾನರಹಿತ ಪ್ರೌಢ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ಪ್ರಸ್ತಾವನೆಯನ್ನು ಈ ಕಛೇರಿಗೆ ಮಂಜೂರಾತಿಗಾಗಿ ಕಳುಹಿಸಿರುವುದನ್ನು ಪರಿಗಣಿಸಲಾಗಿ, ಪ್ರತಿ ಶಾಲೆಯ ಆ ಪ್ರದೇಶದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹಾಗೂ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ಮೂಲಭೂತ ಸೌಲಭ್ಯಗಳನ್ನು ಒದಗಿಸಿದಲ್ಲಿ ಸರ್ಕಾರಿ ಆದೇಶ ದಿ: 19-6-99 ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಪೂರೈಸಿದ್ದಲ್ಲಿ ಅಂತಹ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಶಾಶ್ವತ ಅನುದಾನರಹಿತ ಷರತ್ತಿನ ಮೇಲೆ ಪರಿಶೀಲಿಸಿ ಅನುಮತಿ ನೀಡಲು ಜಿಲ್ಲಾ ಉಪನಿರ್ದೇಶಕರಿಗೆ ಸೂಚಿಸಲಾಗಿದೆ.

ಷರತ್ತುಗಳು

1) ಇಂತಹ ಮಂಜೂರಾತಿಯು ಶಾಶ್ವತ ಅನುದಾನರಹಿತವಾಗಿರತಕ್ಕದ್ದು, ಆಡಳಿತ ಮಂಡಳಿಗಳು ಮುಂದೆ ಯಾವುದೇ ಸಂದರ್ಭದಲ್ಲಿ ಅನುದಾನವನ್ನು ಕೇಳಿ ಬೇಡಿಕೆಯನ್ನು ಸಲ್ಲಿಸತಕ್ಕದ್ದಲ್ಲ.
2) ಇಂತಹ ಮಂಜೂರಾತಿಯಿಂದ ಯಾವುದೇ ರೀತಿಯ ಅನಾರೋಗ್ಯದ ಸ್ಪರ್ಧೆ ಉಂಟಾಗಬಾರದು ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಸುತ್ತಮುತ್ತಲಿನ ಶಾಲೆಗಳ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಧಕ್ಕೆ ಉಂಟಾಗಬಾರದು. ಮತ್ತು ಈ ಬಗ್ಗೆ ಹೆಚ್ಚುವರಿ ವಿಭಾಗಗಳ ಸಂಬಂಧದಲ್ಲಿ ನೆರೆಹೊರೆಯ ಶಾಲೆಗಳಿಂದ

ಅಥವಾ ಪೋಷಕರಿಂದ ಆಕ್ಷೇಪಣೆಗಳು ಬಂದಲ್ಲಿ ಅವುಗಳನ್ನು ಸಹ ಪರಿಗಣಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳತಕ್ಕದ್ದು.

3) ಸಂಬಂಧಪಟ್ಟ ಆಡಳಿತ ಮಂಡಳಿಗಳು ಶಿಕ್ಷಣ ಅಧಿನಿಯಮ ಹಾಗೂ ನಿಯಮಗಳ ಉಪಬಂಧಗಳ ಎಲ್ಲಾ ಷರತ್ತುಗಳನ್ನು ಮತ್ತು ನಿಬಂಧನೆಗಳನ್ನು ಪೂರೈಸಿರಬೇಕು.
4) ತರಬೇತಿ ಹೊಂದಿದ ಅರ್ಹ ವಿದ್ಯಾರ್ಹತೆಯುಳ್ಳ ಶಿಕ್ಷಕರುಗಳನ್ನು ನೇಮಿಸಿಕೊಳ್ಳಬೇಕು.
5) ಪೀಠೋಪಕರಣ ಮತ್ತು ಪಾಠೋಪಕರಣ ಹಾಗೂ ಸಾಕಷ್ಟು ಕೊಠಡಿಗಳ ವ್ಯವಸ್ಥೆಯನ್ನು ಹೊಂದಿರಬೇಕು.
6) ಇಲಾಖೆಯ ಅನುಮತಿ ಇಲ್ಲದೆ ಹೆಚ್ಚುವರಿ ವಿಭಾಗಗಳನ್ನು ತೆರೆಯಬಾರದು.
7) ವಿದ್ಯಾರ್ಥಿಗಳ ಸಂಖ್ಯೆ ನಿಯಮಾನುಸಾರ ನಿರ್ದಿಷ್ಟ ಸಂಖ್ಯೆಯಲ್ಲಿರಬೇಕು.
8) ಮಂಜೂರಾತಿ ನೀಡಿರುವ ಮಾಧ್ಯಮದಲ್ಲಿಯೇ ತರಗತಿಯನ್ನು ತೆರೆಯತಕ್ಕದ್ದು.
9) ನಿಯಾಮಾವಳಿ ಪ್ರಕಾರ ಫೀ ಶುಲ್ಕವನ್ನು ವಸೂಲು ಮಾಡತಕ್ಕದ್ದು.

(ಸಹಿ)
ನಿರ್ದೇಶಕರು
(ಪ್ರೌಢ ಶಿಕ್ಷಣ)

This document was created with Win2PDF available at http://www.daneprairie.com.
The unregistered version of Win2PDF is for evaluation or non-commercial use only.